ರಾಜ್ಯದಲ್ಲಿ ಮಕ್ಕಳ ಸಾಹಿತ್ಯ ಅಕಾಡೆಮಿ ಸ್ಥಾಪಿಸುವುದು.

2251(3393) ಶ್ರೀ ಪಾಟೀಲ್ ಶಿವಾನಂದ ಸಿದ್ಧರಾಮಗೌಡ (ತಿಕೋಟ) :— ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಮಕ್ಕಳ ಸಾಹಿತ್ಯ ಅಕಾಡೆಮಿ ಸ್ಥಾಪಿಸಲಾಗಿದೆಯೇ?

ಆ) ಸ್ಥಾಪಿಸದಿದ್ದರೆ, ಈ ಬಗ್ಗೆ ಸರ್ಕಾರ ಯೋಚಿಸುತ್ತಿರುವುದೇ?

ಇ) ಖ್ಯಾತ ಮಕ್ಕಳ ಸಾಹಿತಿ, ಇತ್ತೀಚೆಗೆ ನಿಧನರಾದ ಸಿಸು ಸಂಗಮೇಶ ಅವರ ಕನಸಾದ ಅಕಾಡೆಮಿ ಸ್ಥಾಪಿಸುವುದು ಸಮಂಜಸವಲ್ಲವೆ?

ಈ) ಬಿಜಾಪುರ ಜಿಲ್ಲೆ ಮಕ್ಕಳ ಸಾಹಿತ್ಯಕ್ಕೆ ತನ್ನದೇ ಆದ ವಿಶೇಷ ಕೊಡುಗೆ ನೀಡಿದೆ ಎಂಬುದನ್ನು ಸರ್ಕಾರ ಅರಿತಿದೆಯೇ ಜಿಲ್ಲೆಯ ಅನೇಕ ಖ್ಯಾತ ಸಾಹಿತಿಗಳು, ಅನೇಕ ವೇದಿಕೆಗಳು ರಾಜ್ಯದಲ್ಲಿ ಮಕ್ಕಳ ಸಾಹಿತ್ಯ ಅಕಾಡೆಮಿ ಸ್ಥಾಪಿಸುವಂತೆ ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ ಪ್ರಸಕ್ತ ವರ್ಷದಿಂದ ಈ ಅಕಾಡೆಮಿ ಸ್ಥಾಪಿಸಲಾಗುತ್ತದೆಯೆ;

ಶ್ರೀಮತಿ ರಾಣಿಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು) :—

ಅ) ಇಲ್ಲ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಈ) ಬಂದಿದೆ.

ಉ) ಇಲ್ಲ, ಕಾರಣ ಈಗಾಗಲೇ ರಾಜ್ಯ ಸರ್ಕಾರ ಸ್ಥಾಪಿಸಿರುವ ಕರ್ನಾಟಕ ಸಾಹಿತ್ಯ ಅಕಾಡೆಮಿ ಕನ್ನಡ ಪುಸ್ತಕ ಪ್ರಾಧಿಕಾರ, ಮಕ್ಕಳ ಸಾಹಿತ್ಯಕ್ಕೆ ಸಂಬಂಧಪಟ್ಟಂತೆ ಕಾರ್ಯಕ್ರಮಗಳು ಮತ್ತು ಪ್ರಕಟಣೆಗಳನ್ನು ತಮ್ಮ ಧ್ಯೇಯೋದ್ದೇಶಗಳಲ್ಲಿ ಅಳವಡಿಸಿಕೊಂಡು ಅನುಷ್ಠಾನಗೊಳಿಸುತ್ತಿದೆ.

ಬೆಳ್ತಂಗಡಿ ತಾಲ್ಲೂಕಿನಲ್ಲಿ ನಬಾರ್ಡ್ ಯೋಜನೆಯಡಿಯಲ್ಲಿ ಅಭಿವೃದ್ಧಿಗೊಳಿಸಲಾಗುವ ರಸ್ತೆಗಳು.

2253(1848) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.